# Akashvani : Bangalore
# Regional Bulletin In Kannada
# 09.11.2024 / 18.40 hrs

## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ
## 09.11.2024 / 18.40 hrs

**<><*<><>*><>**

<u>**ಮುಖ್ಯಾಂಶಗಳು**</u>

**೧. ದೇಶದ ಆರ್ಥಿಕ ಸ್ಥಿತಿ ಬಲವರ್ಧನೆಗೆ ರಾಜ್ಯದ ಎಂಎಸ್‌ಎಂಇಗಳ ಕೊಡುಗೆ ಅಪಾರ - ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್**

**೨. ವಿಧಾನಸಭಾ ಉಪ ಚುನಾವಣೆ ಪ್ರಚಾರ ಬಿರುಸು ; ವಿವಿಧ ಪಕ್ಷಗಳ ನಾಯಕರಿಂದ ಮತಯಾಚನೆ**

**೩. ರಾಜ್ಯದ ಗ್ಯಾರಂಟಿ ಅನುಷ್ಠಾನದ ಬಗ್ಗೆ ಅಧ್ಯಯನ ನಡೆಸುವಂತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸವಾಲು**

**೪. ಕಾಂಗ್ರೆಸ್ ನಿಂದ ವಕ್ಫ್ ವಿವಾದದ ಮೂಲಕ ಜನರ ದಿಕ್ಕು ತಪ್ಪಿಸೋ ಹುನ್ನಾರ - ಪ್ರಲ್ಹಾದ್ ಜೋಷಿ ಆರೋಪ**

**೫. ಮಂಡ್ಯದ ಮೇಲುಕೋಟೆಯಲ್ಲಿ ರಾಜಮುಡಿ ಉತ್ಸವಕ್ಕೆ ಜಿಲ್ಲಾಧಿಕಾರಿ ಚಾಲನೆ**

**<><*<><>*><>**

ಕರ್ನಾಟಕ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಕೇರಳ, ಮತ್ತು ಕೇಂದ್ರಾಡಳಿತ ಪ್ರದೇಶವಾದ ಪುದುಚೇರಿ ಸೇರಿದಂತೆ ದಕ್ಷಿಣ ಪ್ರದೇಶದ ೧೦ ಪ್ರಾದೇಶಿಕ ಗ್ರಾಮೀಣ ಬ್ಯಾಂಕ್‌ಗಳ ಕಾರ್ಯಕ್ಷಮತೆ ಕುರಿತಂತೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಬೆಂಗಳೂರಿನಲ್ಲಿಂದು ಸಭೆ ನಡೆಸಿದರು. ಸಭೆಯಲ್ಲಿ ಗ್ರಾಮೀಣ ಆರ್ಥಿಕತೆಯನ್ನು ಬೆಂಬಲಿಸುವಲ್ಲಿ ಗ್ರಾಮೀಣ ಬ್ಯಾಂಕ್‌ಗಳ ಕಾರ್ಯಕ್ಷಮತೆಯನ್ನು ನಿರ್ಮಲಾ ಸೀತಾರಾಮನ್ ಪರಿಶೀಲನೆ ನಡೆಸಿದರು. ಇನ್ನೊಂದೆಡೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರೊಂದಿಗೆ ನಿರ್ಮಲಾ ಸೀತಾರಾಮನ್ ಬೆಂಗಳೂರಿನ ಪೀಣ್ಯಾ ಕೈಗಾರಿಕಾ ಪ್ರದೇಶದಲ್ಲಿರುವ ಎಂ.ಎಸ್.ಎಂ.ಇ ಘಟಕಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಈ ವೇಳೆ ಮಾತನಾಡಿದ ಅವರು, ದೇಶದ ಆರ್ಥಿಕ ಸ್ಥಿತಿ ಬಲವರ್ಧನೆಗೆ ಕರ್ನಾಟಕದ ೩೫ ಲಕ್ಷ ಎಂಎಸ್‌ಎಂಇಗಳ ಕೊಡುಗೆ ಅಪಾರ ಎಂದು ಶ್ಲಾಘಿಸಿದರು.

**ಧ್ವನಿ : ನಿರ್ಮಲಾ ಸೀತಾರಾಮನ್**

ಪೀಣ್ಯಾ ಕೈಗಾರಿಕೆಗಳ ಒಕ್ಕೂಟ ಸುಮಾರು ೬ ಸಾವಿರದ ೪೦೦ ಎಂಎಸ್‌ಎಂಇ ಸದಸ್ಯತ್ವವನ್ನು ಹೊಂದಿರುವ ಅತಿದೊಡ್ಡ ಸೂಕ್ಷ್ಮ, ಸಣ್ಣ, ಮಧ್ಯಮಗಳ ಸಂಘಗಳಲ್ಲಿ ಒಂದಾಗಿದೆ. ಇದಕ್ಕೂ ಮೊದಲು ನಿರ್ಮಲಾ ಸೀತಾರಾಮನ್ ಬೆಂಗಳೂರಿನ ಖಾಸಗಿ ವಿಶ್ವ ವಿದ್ಯಾನಿಲಯದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.  ಈ ವೇಳೆ ಮಾತನಾಡಿದ ಅವರು, ಭಾರತದ ಡಿಜಿಟಲ್ ಕ್ರಾಂತಿಯನ್ನು ಕೊಂಡಾಡಿದರು. ೨೦೧೪ರಲ್ಲಿ ಪ್ರಧಾನಮಂತ್ರಿ ಜನ್‌ಧನ್ ಯೋಜನೆಯೊಂದಿಗೆ ಭಾರತದ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಮಹತ್ತರ ತಿರುವು ಉಂಟಾಯಿತು ಎಂದು ಶ್ಲಾಘಿಸಿದರು.

**<><*<><>*><>**

ರಾಜ್ಯದಲ್ಲಿ ಉಪಚುನಾವಣೆಗೆ ದಿನಗಣನೆ ಆರಂಭಗೊಂಡಿದ್ದು, ಪ್ರಚಾರ ಬಿರುಸುಗೊಂಡಿದೆ. ಮತದಾನಕ್ಕೆ ೫ದಿನ ಬಾಕಿಯಿರುವಂತೆ ರಾಜಕೀಯ ಪಕ್ಷಗಳು ಮತದಾರರನ್ನು ಸೆಳೆಯಲು ಮುಂದಾಗಿವೆ. ಸಂಡೂರಿನ ವಿಠಲಾಪುರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ತುಕಾರಾಮ್  ಪರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತಯಾಚಿಸಿದರು. ಈ ವೇಳೆ ಮಾತನಾಡಿದ ಅವರು, ಜನಾರ್ಧನ ರೆಡ್ಡಿಯವರೇ, ಕರ್ನಾಟಕ ರಾಜ್ಯ ರಾಜಕಾರಣಕ್ಕೆ ನಿಮ್ಮ  ಕೊಡುಗೆ ಏನು ಎಂದು ಪ್ರಶ್ನಿಸಿದ್ದಾರೆ. ಕೋವಿಡ್ ಹಗರಣ ನಡೆಸಿದ ಬಿಜೆಪಿ ನಾಯಕರನ್ನು ರಾಜ್ಯದ ಜನತೆ ಕ್ಷಮಿಸುವುದಿಲ್ಲ ಎಂದು ತಿಳಿಸಿದ್ದಾರೆ. ಇದೇ ವೇಳೆ ಮಾತನಾಡಿದ ಸಚಿವ ಸಂತೋಷ ಲಾಡ್  ಟಿ.ಬಿ. ಡ್ಯಾಂನಿಂದ ಸಂಡೂರಿನ ೧೩೬ ಹಳ್ಳಿಗಳಿಗೆ ಕುಡಿಯುವ ನೀರನ್ನು ಒದಗಿಸಿದ ಭಗೀರಥ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ಕೊಂಡಾಡಿದರು. ಇನ್ನೊಂದೆಡೆ

ಸಂಡೂರಿನಲ್ಲಿ ಬಿಜೆಪಿ ಅಭ್ಯರ್ಥಿ ಬಂಗಾರು ಹನುಮಂತು ಪರ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮತಯಾಚಿಸಿದರು. ಈ ವೇಳೆ ಮಾತನಾಡಿದ ಅವರು, ೩ ಕ್ಷೇತ್ರಗಳಲ್ಲೂ ಬಿಜೆಪಿ- ಎನ್‌ಡಿಎ ಅಭ್ಯರ್ಥಿಗಳ ಗೆಲುವು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಸಂಡೂರಿನಲ್ಲಿ ಸೋಲಿನ ಭೀತಿಯಿಂದ ಮುಖ್ಯಮಂತ್ರಿ ಸೇರಿದಂತೆ ಸಚಿವ ಸಂಪುಟ ಬೀಡುಬಿಟ್ಟಿದೆ ಎಂದು ವ್ಯಂಗ್ಯವಾಡಿದರು. ಚನ್ನಪಟ್ಟಣದಲ್ಲಿ ವಿಧಾನಸಭಾ ಉಪಚುನಾವಣಾ ಪ್ರಚಾರ ಬಿರುಸುಗೊಂಡಿದೆ. ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು, ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಎಸ್.ಎಂ. ಹಳ್ಳಿ ಮತ್ತು ಮಾಲೂರು ಪಟ್ಟಣದಲ್ಲಿ ಪ್ರಚಾರ ನಡೆಸಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ೫ ವರ್ಷ ಅಧಿಕಾರ ಪೂರ್ಣಗೊಳಿಸುವುದಿಲ್ಲ ಎಂದು ತಿಳಿಸಿದರು. ಕೇಂದ್ರ ಸಚಿವ ಕುಮಾರಸ್ವಾಮಿ, ಮುಕುಂದಾ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಎನ್‌ಡಿಎ ಅಭ್ಯರ್ಥಿಯನ್ನು ಗೆಲ್ಲಿಸುವಂತೆ ಮನವಿ ಮಾಡಿದರು. ಇನ್ನೊಂದೆಡೆ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ. ಯೋಗೇಶ್ವರ್ ಪರ ಮಾಜಿ ಸಂಸದ ಡಿ.ಕೆ. ಸುರೇಶ್, ಸಚಿವರಾದ ಸುಧಾಕರ್, ರಾಮಲಿಂಗಾರೆಡ್ಡಿ, ದಿನೇಶ್ ಗುಂಡೂರಾವ್, ಶಾಸಕರಾದ ಡಾ. ರಂಗನಾಥ್, ನರೇಂದ್ರ ಸ್ವಾಮಿ, ಪ್ರದೀಪ್ ಈಶ್ವರ್, ಸೇರಿದಂತೆ ಹಲವು ಮುಖಂಡರು ಮತಯಾಚಿಸಿದರು. ಶಿಗ್ಗಾಂವಿ ಉಪ ಚುನಾವಣೆಗೆ ಪ್ರಚಾರ ಬಿರುಸುಗೊಂಡಿದ್ದು, ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಅಹಮ್ಮದ್ ಖಾನ್ ಪಠಾಣ್ ಪರವಾಗಿ ಶಿಗ್ಗಾಂವಿಯಲ್ಲಿ ಪ್ರಚಾರ ನಡೆಸಲಿದ್ದಾರೆ. ಬಿಜೆಪಿ ಅಭ್ಯರ್ಥಿ ಭರತ ಬೊಮ್ಮಾಯಿ ಪರವಾಗಿ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ, ಕೇಂದ್ರ ಸಚಿವ ಪ್ರಲ್ಹಾದ್ ಜ್ಯೋಶಿ, ಸಂಸದರಾದ ಜಗದೀಶ್ ಶೆಟ್ಟರ್, ಬಸವರಾಜ ಬೊಮ್ಮಾಯಿ ಮತಯಾಚಿಸಲಿದ್ದಾರೆ.

<><*<><>*><>

ಕರ್ನಾಟಕದಲ್ಲಿನ ಗ್ಯಾರಂಟಿ ಅನುಷ್ಠಾನದ ಬಗ್ಗೆ ಮಹಾಯುತಿ ನಾಯಕರು ಅಧ್ಯಯನ ನಡೆಸಲಿ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸವಾಲು ಹಾಕಿದ್ದಾರೆ. ಮುಂಬೈನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ಯಾರಂಟಿ ಬಗ್ಗೆ ಸುಳ್ಳು ಜಾಹಿರಾತು ನೀಡುತ್ತಿರುವ ಮಹಾಯುತಿ ನಾಯಕರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕರ್ನಾಟಕದಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ೧ ಕೋಟಿ ೨೨ ಲಕ್ಷ ಮಹಿಳೆಯರು ತಿಂಗಳಿಗೆ ೨ ಸಾವಿರ ರೂಪಾಯಿ ಪಡೆಯುತ್ತಿದ್ದಾರೆ. ಗೃಹಜ್ಯೋತಿ ಯೋಜನೆಯಡಿ ೧ ಕೋಟಿ ೬೪ ಲಕ್ಷ ಕುಟುಂಬಗಳು ೨೦೦ ಯೂನಿಟ್ ಉಚಿತ ವಿದ್ಯುತ್ ಪಡೆಯುತ್ತಿದ್ದಾರೆ. ಬಡತನ ರೇಖೆಗಿಂತ ಕೆಳಗಿರುವ ೪ ಕೋಟಿಗೂ ಅಧಿಕ ಜನರು ಬಿಪಿಎಲ್ ಯೋಜನೆಯಡಿ ೧೦ ಕೆ.ಜಿ. ಉಚಿತ ಅಕ್ಕಿ ಪಡೆಯುತ್ತಿದ್ದಾರೆ. ಮೂರು ಕೋಟಿ ೨೦ ಲಕ್ಷ ಮಹಿಳೆಯರು ಶಕ್ತಿಯೋಜನೆಯ ಮೂಲಕ ರಾಜ್ಯ ಸಾರಿಗೆ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಿದ್ದು, ಯುವನಿಧಿ ಯೋಜನೆಯಡಿ ೫ ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ತಿಂಗಳಿಗೆ ೩ ಸಾವಿರ ರೂಪಾಯಿಗಳನ್ನು ಪಡೆದಿದ್ದಾರೆ ಎಂದು ಸಮರ್ಥಿಸಿಕೊಂಡರು.

<><*<><>*><>

ವಕ್ಫ್ ವಿವಾದದಲ್ಲಿ ಕಾಂಗ್ರೆಸ್ ಪಕ್ಷ "ಜನರ ದಿಕ್ಕು ತಪ್ಪಿಸೋ ಅಭಿಯಾನ" ಶುರು ಮಾಡಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವುದೇ ವಿವಾದ, ವಿಚಾರದಲ್ಲಿ ಜನರ ದಿಕ್ಕು ತಪ್ಪಿಸುವುದು, ಕಾಂಗ್ರೆಸ್ ಸಂಸ್ಕೃತಿ ಆಗಿದೆ ಎಂದು ತಿಳಿಸಿದ್ದಾರೆ. ವಕ್ಫ್ ವಿಚಾರದಲ್ಲೂ ಕಾಂಗ್ರೆಸ್ ಜನರ ಹಾದಿ ತಪ್ಪಿಸುತ್ತಿದ್ದು ಬಿಜೆಪಿ ವಕ್ಫ್ ಅತಿಕ್ರಮಿಸಲು ಬಿಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ವಿಶ್ವ ವಿಖ್ಯಾತ ಮೇಲುಕೋಟೆ ಚೆಲುವ ನಾರಾಯಣ ಸ್ವಾಮಿ ದೇವಸ್ಥಾನಲ್ಲಿ ನಡೆಯುವ ರಾಜಮುಡಿ ಉತ್ಸವಕ್ಕೆ ಮಂಡ್ಯ ನಗರದ  ಜಿಲ್ಲಾ ಖಜಾನೆಯಿಂದ ರಾಜಮುಡಿಗೆ ಇಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಪೂಜೆ ಸಲ್ಲಿಸಿ ಪೊಲೀಸ್ ಭದ್ರತೆಯ ಜೊತೆಗೆ ಮೇಲುಕೋಟೆ ದೇವಸ್ಥಾನಕ್ಕೆ ಕಳುಹಿಸಿಕೊಡಲಾಯಿತು. ಜಿಲ್ಲಾಧಿಕಾರಿ ಡಾ. ಕುಮಾರ್ ಅವರು ಮಾತನಾಡಿ, ನವೆಂಬರ್ ೧೮ರವರೆಗೆ ರಾಜಮುಡಿ ಉತ್ಸವವಿರುವುದರಿಂದ ಅಧಿಕಾರಿಗಳ ಉಪಸ್ಥಿತಿಯೊಂದಿಗೆ ಪೋಲಿಸ್ ಬಿಗಿ ಭದ್ರತೆಯಲ್ಲಿ ರಾಜಮುಡಿಯನ್ನು ಮೇಲುಕೋಟೆ ಚೆಲುವನಾರಾಯಣ ಸ್ವಾಮಿ ದೇವಸ್ಥಾನಕ್ಕೆ ಕಳಿಸಿಕೊಡಲಾಗುತ್ತಿದೆ ಎಂದರು.

<><*<><>*><>

ನಿರ್ಮಲ ತುಂಗಾಭದ್ರಾ ಅಭಿಯಾನ- ಬೃಹತ್ ಜಲಜಾಗೃತಿ ಪಾದಯಾತ್ರೆಯ ಭಾಗವಾಗಿ ಶಿವಮೊಗ್ಗ ನಗರದಲ್ಲಿ ತುಂಗಾ ಆರತಿ ಸೇರಿದಂತೆ ವಿವಿಧ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಶಾಸಕ ಎಸ್.ಎನ್.ಚೆನ್ನಬಸಪ್ಪ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿ ಮಾತನಾಡಿದ ಅವರು, ತುಂಗಾ ಹಾಗೂ ಭದ್ರಾ ನದಿಯ ಪಾತ್ರದ ಜನರಿಗೆ ಜಲಮಾಲಿನ್ಯವಾಗುತ್ತಿರುವ ಬಗ್ಗೆ ಮಾಹಿತಿ ಹಾಗೂ ನದಿಯ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸಲು ನಿರ್ಮಲ ತುಂಗಾಭದ್ರಾ ಅಭಿಯಾನ ನಡೆಸಲಾಗುತ್ತಿದೆ ಎಂದು ಹೇಳಿದ್ದಾರೆ. ನಿರ್ಮಲ ತುಂಗಾಭದ್ರಾ ಅಭಿಯಾನದ ಭಾಗವಾಗಿ ನಾಳೆ ಸಂಜೆ ತುಂಗಾ ಆರತಿ ಕಾರ್ಯಕ್ರಮ ಆಯೋಜಿಸಲಾಗಿದೆ. ತುಮಕೂರು ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಮಹಾ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದು, ಸಚಿವ ಮಧು ಬಂಗಾರಪ್ಪ, ಸಂಸದ ಬಿ.ವೈ.ರಾಘವೇಂದ್ರ ಸೇರಿದಂತೆ ಪ್ರಮುಖರು ಭಾಗಿಯಾಗಲಿದ್ದಾರೆ.

<><*<><>*><>

ಡಿಸೆಂಬರ್ ಅಥವಾ ಜನವರಿ ತಿಂಗಳಲ್ಲಿ ಕರ್ನಾಟಕದ ೨೧೦ ಐತಿಹಾಸಿಕ ಸ್ಮಾರಕಗಳು ರಾಜ್ಯ ಸರ್ಕಾರದ ಅಧಿಸೂಚನೆಗೆ ಒಳಪಡಲಿವೆ ಎಂದು  ಪ್ರವಾಸೋದ್ಯಮ ಸಚಿವ ಹೆಚ್.ಕೆ ಪಾಟೀಲ್ ತಿಳಿಸಿದ್ದಾರೆ. ಕರ್ನಾಟಕ ಇತಿಹಾಸ ಅಕಾಡೆಮಿಯ ೩೮ನೇ ವಾರ್ಷಿಕ ರಾಷ್ಟ್ರೀಯ ಸಮ್ಮೇಳನ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಕರ್ನಾಟಕದಲ್ಲಿ ಹಲವಾರು ಕಥೆ ಇತಿಹಾಸ, ಕಲೆ ಮತ್ತು ಸಂಸ್ಕೃತಿಯನ್ನು ಬಿಂಬಿಸುವ  ೨೫ ಸಾವಿರ ಐತಿಹಾಸಿಕ ಸ್ಮಾರಕಗಳಿವೆ. ಅವುಗಳಲ್ಲಿ  ಈಗ ಕೇವಲ ೮೪೪ ಸ್ಮಾರಕಗಳು ಮಾತ್ರ ಸರ್ಕಾರದ ಅಧಿಸೂಚನೆಗೆ ಒಳಪಟ್ಟಿವೆ ಎಂದು ಹೇಳಿದರು. ಅಶೋಕನ ೧೪ ಶಾಸನಗಳು ದೊರೆತಿರುವುದು ಕರ್ನಾಟಕದ ಹೆಮ್ಮೆ ಎಂದು ಹೇಳಿದರು.

<><*<><>*><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಇಂದು ಮತ್ತು ನಾಳೆ ದತ್ತಮಾಲೆ ಅಭಿಯಾನ ನಡೆಯಲಿದೆ. ರಾಜ್ಯದ ವಿವಿಧೆಡೆಯಿಂದ ಭಕ್ತರು ದತ್ತಪೀಠಕ್ಕೆ ಆಗಮಿಸುತ್ತಿದ್ದು, ನಾಳೆ ನಗರದಲ್ಲಿ ಶೋಭಾ ಯಾತ್ರೆ, ಧಾರ್ಮಿಕ ಸಭೆ ಹಮ್ಮಿಕೊಳ್ಳಲಾಗಿದೆ. ಮುಂಜಾಗ್ರತ ಕ್ರಮವಾಗಿ ಜಿಲ್ಲೆಯಾದ್ಯಂತ ಪೊಲೀಸ್ ಇಲಾಖೆ ಬಿಗಿ ಭದ್ರತೆ ಕೈಗೊಂಡಿದ್ದು ಜಿಲ್ಲೆಯ ಗಡಿ ಭಾಗದಲ್ಲಿ ಪೊಲೀಸ್ ತಪಾಸಣಾ ಕೇಂದ್ರಗಳನ್ನು ಆರಂಭಿಸಲಾಗಿದೆ. ಇಂದು ಮತ್ತು ನಾಳೆ ಈ ಭಾಗದ ಪ್ರವಾಸಿತಾಣಗಳಿಗೆ ಪ್ರವಾಸಿಗರನ್ನು ನಿರ್ಬಂಧಿಸಲಾಗಿದೆ ದತ್ತಮಾಲಾಧಾರಿಗಳಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಕುಷ್ಠರೋಗ ಪತ್ತೆ ಹಚ್ಚುವ ಅಭಿಯಾನಕ್ಕೆ ಚಾಲನೆ ದೊರೆತಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೆಂಕಟೇಶ್ ಮಾತನಾಡಿ, ಕುಷ್ಠರೋಗ ನಿವಾರಣೆ ಮಾಡಬಹುದಾದ ಕಾಯಿಲೆಯಾಗಿದ್ದು, ರೋಗ ಪೀಡಿತರು ಭಯಪಡುವ ಅಗತ್ಯವಿಲ್ಲ ಎಂದು ಹೇಳಿದ್ದಾರೆ.  ಸರ್ಕಾರದ ಆದೇಶದಂತೆ ಕುಷ್ಠರೋಗ ಮುಕ್ತ ಭಾರತವನ್ನಾಗಿಸಲು ರೋಗ ಪತ್ತೆ ಹಚ್ಚುವ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ. ಕುಷ್ಠರೋಗದ ಬಗೆ ಭಯ ಸಾಮಾಜಿಕ ಕಳಂಕ ಬಿಟ್ಟು ತಪಾಸಣೆಗೆ ಚಿಕಿತ್ಸೆ ನೀಡಲು ಸಹಕರಿಸಬೇಕೆಂದು ಮನವಿ ಮಾಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**